ST. FRANCIS DE SALES COLLEGE
A FRANSALIAN INSTITUTE OF HIGHER EDUCATION AUTONOMOUS
NAAC A GRADE • AFFILIATED TO BANGALORE UNIVERSITY • AICTE APPROVED • 2(F) & 12 (B) RECOGNITION OF UGC • ISO 9001:2015 CERTIFIED
Electronics City P.O. Bengaluru - 560 100, Karnataka, INDIA (+91) 8088140679 68 pro@sfscollege.in www.sfscollege.in

# END SEMESTER EXAMINATION – DECEMBER 2024

## KANNADA – I SEMESTER BCOM / BCOM (TOURISM)

## 24BCO11K – ವಾಣಿಜ್ಯ ಕನ್ನಡ 1

**Time: 3 Hours** **Max. Marks: 80**

**I. ಕೆಳಗಿನ ಯಾವುದಾದರೂ ಮೂರು ಪ್ರಶ್ನೆಗಳಿಗೆ ಉತ್ತರ ಬರೆಯಿರಿ. (200 ಪದಗಳಿಗೆ ಮೀರದಂತೆ)** 3x10=30

1. ಭಾಷೆಗಳ ನಡುವಿನ ಬಾಂಧವ್ಯವನ್ನು ಕಾಣಿಕೆ ಪದ್ಯದ ಹಿನ್ನೆಲೆಯಲ್ಲಿ ವಿವರಿಸಿ.
2. ಯಾವುದೇ ಗುರಿಯೊಂದರ ಸಾಧನೆಗೆ ತೀವ್ರವಾದ ಹಂಬಲ ಎಷ್ಟು ಮುಖ್ಯ ಎಂಬುದನ್ನು ಜೇಡರ ಹುಳು ಪದ್ಯದ ಹಿನ್ನೆಲೆಯಲ್ಲಿ ವಿವರಿಸಿ.
3. ಪಂಪ, ರನ್ನ, ಕುಮಾರವ್ಯಾಸ ಇವರಲ್ಲಿ ಇಬ್ಬರನ್ನು ಕುರಿತು ಟಿಪ್ಪಣಿ ಬರೆಯಿರಿ.
4. ಕಿರಾಣಿ, ಬೇಕರಿ, ತರಕಾರಿ ಹಾಗೂ ಉಡುಗೊರೆ ಅಂಗಡಿಗಳ ಕುರಿತು ವಿವರಿಸಿ.

**II. ಕೆಳಗಿನ ಯಾವುದಾದರೂ ಐದು ಪ್ರಶ್ನೆಗಳಿಗೆ ಉತ್ತರ ಬರೆಯಿರಿ. (100 ಪದಗಳಿಗೆ ಮೀರದಂತೆ)** 5x5=25

1. ಉಪಭಾಷೆಗಳ ವ್ಯಾಪ್ತಿಯನ್ನು ಧ್ವನಿಮುದ್ರಣ ವ್ಯವಸ್ಥೆ ಬದಲಿಸಿದ ಬಗೆಯನ್ನು ಕುರಿತು ಚರ್ಚಿಸಿ.
2. ಕನ್ನಡವನ್ನು ಹೇಗೆ ಬಳಸಬೇಕು ಎಂದು ಲೇಖಕರು ಹೇಳಿದ್ದಾರೆ?
3. ಇಂಗ್ಲಿಷಿನ ತತ್ಸಮ ತದ್ಭವಗಳಲ್ಲಿ ಯಾವ ರೀತಿಯ ಪ್ರವೃತ್ತಿಗಳು ಕಂಡುಬರುತ್ತವೆ? ವಿವರಿಸಿ.
4. ಝೆನ್ ಕತೆಯಲ್ಲಿ ದೇವರನ್ನು ಕಾಣುವ ಹಂಬಲ ಹೇಗಿರಬೇಕೆಂದು ವಿವರಿಸಲಾಗಿದೆ?
5. 1940ರಲ್ಲಿ ಸ್ಟಾಲಿನ್ ರಷ್ಯಾದಲ್ಲಿ ಯಾವ ರೀತಿಯ ಮನೋನಿಯಂತ್ರಣ ಪ್ರಯೋಗಗಳನ್ನು ನಡೆಸಿದ್ದನು?
6. ನೇರ ತೆರಿಗೆ ಮತ್ತು ಪರೋಕ್ಷ ತೆರಿಗೆ ಸಂಗ್ರಹದ ಬಗ್ಗೆ ನಿಮ್ಮ ಅಭಿಪ್ರಾಯಗಳನ್ನು ತಿಳಿಸಿ.

**III. ಕೆಳಕಂಡ ಪಠ್ಯವನ್ನು ಮೂರನೇ ಒಂದು ಭಾಗಕ್ಕೆ ಸಂಕ್ಷೇಪಿಸಿ ಬರೆದು, ಸೂಕ್ತ ಶೀರ್ಷಿಕೆ ನೀಡಿ.** 1x5=5

ಒಂದು ಕಾಡಿನ ನಿವಾಸಿಗಳಾಗಿದ್ದ ಕಪ್ಪೆಗಳಲ್ಲಿ ಕೆಲವು ಒಂದು ದಿನ ಆಹಾರ ಹುಡುಕಿಕೊಂಡು ಕುಪ್ಪಳಿಸುತ್ತ ಗುಂಪಾಗಿ ಹೋಗುತ್ತಿದ್ದವು. ಅವುಗಳಲ್ಲಿ ಎರಡು ಆಯತಪ್ಪಿ ದಾರಿಯಲ್ಲಿದ್ದ ಹಳ್ಳವೊಂದಕ್ಕೆ ಬಿದ್ದು ಬಿಟ್ಟವು. ಮಿಕ್ಕ ಕಪ್ಪೆಗಳು ಹಳ್ಳದ ಸುತ್ತ ಗುಂಪು ಕೂಡಿದವು. ಇಣುಕಿ ನೋಡಿದವು. ಹಳ್ಳವು ಆಳವಾಗಿತ್ತು. ಒಳಗೆ ಬಿದ್ದ ನತದೃಷ್ಟ ಕಪ್ಪೆಗಳನ್ನು ಕುರಿತು, "ಇಷ್ಟು ಆಳದ ಹಳ್ಳದಿಂದ ಹೇಗೆ ಮೇಲಕ್ಕೆ ಬರುತ್ತೀರಿ? ನಿಮ್ಮ ಕತೆ ಮುಗೀತು" ಎಂದು ಒಕ್ಕೊರಲಿನಿಂದ ವಟಗುಟ್ಟಿದವು. ಒಳಗೆ ಬಿದ್ದ ಕಪ್ಪೆಗಳು ಪ್ರಾಣ ಉಳಿಸಿಕೊಳ್ಳಲು ಜಿಗಿದಾಡಿದಂತೆಲ್ಲ, ಹಳ್ಳದ ಮೇಲೆ ಸುತ್ತುವರೆದು ಕುಳಿತಿದ್ದ ಕಪ್ಪೆಗಳು, "ನೀವು ಮೇಲೆ ಬರುವುದು ಸಾಧ್ಯವೇ ಇಲ್ಲ. ಸುಮ್ಮನೇ ಯಾಕೆ ಎಗರಾಡಿ ಮೈನೋಯಿಸಿಕೊಳ್ಳುತ್ತೀರಿ. ನೀವು ಸತ್ತಂತೆಯೇ ಸರಿ. ವ್ಯರ್ಥ ಪ್ರಯತ್ನ" ಎಂದು ಮತ್ತೆ ಮತ್ತೆ ವಟಗುಟ್ಟುತ್ತಲೇ ಇದ್ದವು.

ST. FRANCIS DE SALES COLLEGE
EXCELLENCE • EFFICIENCY • TRANSFORMATION
ELECTRONICS CITY, BENGALURU

'ಹಳ್ಳದ ಮೇಲಿನಿಂದ ಕಪ್ಪೆಗಳು ಸಾಮೂಹಿಕವಾಗಿ ಪದೇ ಪದೇ ವಟಗುಟ್ಟುತ್ತ ಹಳ್ಳದೊಳಗಿನ ಕಪ್ಪೆಗಳ ಪ್ರಯತ್ನವನ್ನು ನಿರುತ್ಸಾಹಗೊಳಿಸುತ್ತಿದ್ದವು. ತಳದಲ್ಲಿ ಜಿಗಿದಾಡುತ್ತಿದ್ದ ಒಂದು ಕಪ್ಪೆಯು ತಾನು ಹೋರಾಡಿ ಪಾರಾಗಬಲ್ಲೆ ಎನ್ನುವ ಅಂತಃಸ್ಥೈರ್ಯವನ್ನೇ ಕಳೆದುಕೊಂಡಿತು. ಮೃತ್ಯುಕೂಪದಿಂದ ಹೊರ ಬರಲಾರೆಯೆನಿಸಿ ಎದೆ ಹಾರಿ ಅಸುನೀಗಿತು. ಇನ್ನೂ ಜೀವಂತವಾಗಿದ್ದ ಕಪ್ಪೆಯು ತನ್ನ ಪ್ರಯತ್ನವನ್ನು ಬಿಡದೆ ಮುಂದುವರಿಸುತ್ತಿತ್ತು. ಕಪ್ಪೆಗಳು ಮೇಲಿನಿಂದ "ನಿನ್ನ ಕತೆಯೂ ಅಷ್ಟೇ" ಎಂದು ನಿರಾಶಾವಾದದ ಬಲೆಯನ್ನು ನೇಯುತ್ತಿದ್ದವು. "ಜಿಗಿದಷ್ಟೂ ಮೈ ನೋಯಿಸಿಕೊಳ್ಳುತ್ತೀ, ಅಷ್ಟೇ. ನೋವುಂಡು ಸಾಯುವ ಬದಲು ನಿನ್ನ ಸ್ನೇಹಿತನಂತೆ ನೋವಿಲ್ಲದ ಸಾವನ್ನು ಒಪ್ಪಿಕೊಳ್ಳುವುದೇ ಮೇಲು" ಎಂದು ಅದೆಷ್ಟು ಸಲ ಹೇಳಿದವೋ! ಆದರೆ ಆ ಕಪ್ಪೆಯು ಮತ್ತಷ್ಟು ಶಕ್ತಿ ಕೂಡಿಸಿಕೊಂಡು ಪ್ರಯತ್ನವನ್ನು ಮುಂದುವರೆಸಿ ಹಳ್ಳದ ದಡ ಸೇರಿ ಬಚಾವಾಯಿತು.

ಮೇಲಕ್ಕೆ ಬಂದ ಕಪ್ಪೆಯನ್ನು ಮಿಕ್ಕ ಕಪ್ಪೆಗಳು ಸುತ್ತುವರೆದವು. ತಮ್ಮ ಮಾತುಗಳಿಗೆ ಲಕ್ಷ್ಯ ಕೊಡದೆ ಕೊನೆಗೂ ಸಾವಿನ ದವಡೆಯಿಂದ ಪಾರಾಗಿ ಬಂದ ಆ ಕಪ್ಪೆಯನ್ನು ಕುರಿತು, "ಎಷ್ಟು ಪ್ರಯತ್ನಿಸಿದರೂ ನೀನು ಬದುಕಲಾರೆ ಎಂದು ನಾವು ಹೇಳುತ್ತಿದ್ದೆವು. ನಿನಗೆ ಕೇಳಿಸುತ್ತಿರಲಿಲ್ಲವೇ?" ಎಂದು ಕೇಳಿದವು. ಆ ಕಪ್ಪೆಯು ನಿಟ್ಟುಸಿರು ಬಿಡುತ್ತಾ "ಎಲ್ಲರೂ ಸೇರಿ ಏನೋ ವಟಗುಟ್ಟುತ್ತಿದ್ದೀರಿ ಅನ್ನಿಸುತ್ತಿತ್ತು. ನನಗೆ ಕಿವಿ ಕೇಳಿಸುವುದಿಲ್ಲ. ಬಹುಶಃ ಪ್ರಯತ್ನವನ್ನು ಬಿಡದೆ ಮುಂದುವರಿಸುವಂತೆ ನನ್ನಲ್ಲಿ ಉತ್ಸಾಹ ತುಂಬುತ್ತಿದ್ದೀರಿ ಎಂದು ಕೊಂಡು ಪ್ರಯತ್ನವನ್ನು ಮುಂದುವರಿಸಿದೆ. ಧನ್ಯವಾದಗಳು" ಎಂದು ಹೇಳಿ ಮುಂದಕ್ಕೆ ಕುಪ್ಪಳಿಸಿತು. ಅವಾಕ್ಕಾದ ಮಿಕ್ಕ ಕಪ್ಪೆಗಳು ಅದನ್ನು ಹಿಂಬಾಲಿಸಿದವು.

**IV. ಸಂಕ್ಷೇಪಿಸಿದ ಬರಹ ಆಧರಿಸಿ ಎರಡು ಪ್ರಶ್ನೆ ರೂಪಿಸಿ.** **2x1=2**

**V. ಇವುಗಳಲ್ಲಿ ಎರಡು ಪದಗಳಿಗೆ ಸ್ವಂತ ವಾಕ್ಯ ರಚಿಸಿ.** **2x2=4**

1. ಧ್ಯಾನ 2. ಪ್ರತಿಮೆ 3. ಬಡತನ 4. ವ್ಯವಹಾರ

**VI. ಹೆಚ್ಚಿನ ಸಮಯ ವ್ಯಾಸಂಗ ಮಾಡಲು ಅವಕಾಶ ಕೋರಿ, ಕಾಲೇಜಿನ ಪ್ರಾಂಶುಪಾಲರಿಗೆ ಪತ್ರ ಬರೆಯಿರಿ.** **1x5=5**

**VII. ಇವುಗಳಲ್ಲಿ ನಾಲ್ಕು ಪದಗಳಿಗೆ ಅರ್ಥ ಬರೆಯಿರಿ.** **4x1=4**

1. ರಾಜ್ಯಾಂಗ 2. ಇನಿಯ 3. ಬೈಲಾ

4. ಸರಕು 5. ಹುರುಳು 6. ಸಮ್ಮೋಹನ

**VIII. ಈ ಕೆಳಗಿನ ಪ್ರಶ್ನೆಗಳಿಗೆ ಒಂದೊಂದು ಸರಿ ಉತ್ತರವನ್ನು ಗುರುತಿಸಿ ಬರೆಯಿರಿ.** **5x1=5**

1. ನಮ್ಮ ತೋಟದಿನಿಯ ಹಣ್ಣು ಯಾವುದು?

   ಅ) ಇಂಗ್ಲಿಷ್ ಆ) ಕನ್ನಡ ಇ) ಸಂಸ್ಕೃತ ಈ) ಹಿಂದಿ

2. ಗಾಂಧೀಜಿಯವರ ಮಾತೃಭಾಷೆ ಯಾವುದು?

   ಅ) ಮರಾಠಿ ಆ) ಗುಜರಾತಿ ಇ) ಅರೆಬಿಕ್ ಈ) ಬಂಗಾಳಿ

3. 'ಭಕ್ತಿಯೆಂಬುದು ತೋರಿ ಉಂಬ ಲಾಭ' ಎಂದವರು ಯಾರು?

   ಅ) ಅಲ್ಲಮ ಪ್ರಭು ಆ) ಅಕ್ಕಮಹಾದೇವಿ ಇ) ದಾಸಿಮಯ್ಯ ಈ) ಸಿದ್ಧರಾಮ

4. ಜೇಡವನ್ನು ಕೊಲ್ಲಲು ಗುರು ಶಿಷ್ಯನಿಗೆ ಏನನ್ನು ಕೊಟ್ಟನು?

   ಅ) ಕುಡುಗೋಲು ಆ) ಕತ್ತಿ ಇ) ಸೀಮೆಸುಣ್ಣ ಈ) ಕತ್ತರಿ

5. 'ಲೆಟ್ ಅವರ್ ಚಿಲ್ಡ್ರನ್ ಗೋ' ಪುಸ್ತಕ ಬರೆದವರು ಯಾರು?

   ಅ) ಪ್ಯಾಟ್ರಿಕ್ ಆ) ಫ್ರಾಯ್ಡ್ ಇ) ವಾಟ್ಸನ್ ಈ) ಡೆಲ್ಗಾಡೋ

ST. FRANCIS DE SALES COLLEGE
EXCELLENCE • EFFICIENCY • TRANSFORMATION
ELECTRONICS CITY BENGALURU